ಕರ್ನಾಟಕ ಸರ್ಕಾರ
(ಪೊಲೀಸ್ ಇಲಾಖೆ)

ಸಂಖ್ಯೆ:127/ಪಿಆರ್‌ಓ/ಸಿಓಪಿ/2024.

ಪೊಲೀಸ್ ಆಯುಕ್ತರ ರವರ ಕಛೇರಿ,
ಬೆಂಗಳೂರು ನಗರ,
ದಿನಾಂಕ:13/12/2024.

# ಪತ್ರಿಕಾ ಪ್ರಕಟಣೆ

## ಶ್ರೀಗಂಧದ ಮರದ ತುಂಡುಗಳನ್ನು ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದ ಓರ್ವ ವ್ಯಕ್ತಿಯ ಬಂಧನ. 146 ಕೆ.ಜಿ 300 ಶ್ರೀಗಂಧದ ಮರದ ತುಂಡುಗಳ ವಶ. ಮೌಲ್ಯ ₹ 14.60 ಲಕ್ಷ.

ಸುಬ್ರಮಣ್ಯಪುರ ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಸಿಬ್ಬಂದಿಯವರಿಗೆ ದಿನಾಂಕ:05/12/2024 ರಂದು ಬಾತ್ಮೀದಾರರಿಂದ ಖಚಿತ ಮಾಹಿತಿಯೊಂದು ದೊರೆತಿರುತ್ತದೆ. ಮಾಹಿತಿಯಲ್ಲಿ ಸುಬ್ರಮಣ್ಯಪುರ ಪೊಲೀಸ್ ಠಾಣೆಯ ಸರಹದ್ದಿಗೆ ಸೇರಿದ ಕನಕಪುರ ಮುಖ್ಯರಸ್ತೆ ಕಡೆಯಿಂದ ಗುಬ್ಬಲಾಳ ಮೂಲಕ ಉತ್ತರಹಳ್ಳಿ ಕಡೆಗೆ ಹೋಗುವ ರಸ್ತೆಯಲ್ಲಿ ಮ್ಯಾಕ್ಸಿ ಟ್ರಕ್‌ನಲ್ಲಿ ಶ್ರೀಗಂಧದ ಮರದ ತುಂಡುಗಳನ್ನು ಬೆಂಗಳೂರು ನಗರಕ್ಕೆ ಸಾಗಾಟ ಮಾಡುತ್ತಿರುವುದಾಗಿ ಮಾಹಿತಿಯಲ್ಲಿ ತಿಳಿಸಿರುತ್ತಾರೆ.

ಈ ಮಾಹಿತಿಯನ್ನು ಆಧಾರಿಸಿ, ಸುಬ್ರಮಣ್ಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣವನ್ನು ದಾಖಲಿಸಿ, ನಂತರ ಬಾತ್ಮೀದಾರರು ತಿಳಿಸಿದ ಸ್ಥಳಕ್ಕೆ ಧಾವಿಸಿ, ಓರ್ವ ವ್ಯಕ್ತಿಯನ್ನು ವಶಕ್ಕೆ ಪಡೆದುಕೊಳ್ಳಲಾಯಿತು. ವಶಕ್ಕೆ ಪಡೆದ ವ್ಯಕ್ತಿಯನ್ನು ವಿಚಾರಣೆ ಮಾಡಲಾಗಿ ಪ್ರಕರಣದಲ್ಲಿ ಭಾಗಿಯಾಗಿರುವ ಆತನ ಇಬ್ಬರು ಸಹಚರರ ಪೈಕಿ ಓರ್ವನು ಆರೋಪಿಯು ಕೊಡಗು, ವಿರಾಜಪೇಟೆ, ಸಿದ್ದಾಪುರದ ಅರಣ್ಯಗಳಲ್ಲಿ ಸೌಧೆ ತರುವವನಂತೆ ಹೋಗಿ ಶ್ರೀಗಂಧದ ಮರಗಳನ್ನು ಕಡಿದುಕೊಂಡು ಬಂದು ಪಿರಿಯಾಪಟ್ಟಣದ ತನ್ನ ಮನೆ ಮತ್ತು ಹೊಲದಲ್ಲಿ ಬಚ್ಚಿಟ್ಟು, ಆತನ ಮತ್ತೋರ್ವ ಸಹಚರನಿಗೆ ಗಿರಾಕಿಗಳನ್ನು ಹುಡುಕಿ, ಶ್ರೀಗಂಧದ ಮರದ ತುಂಡುಗಳನ್ನು ಮಾರಾಟ ಮಾಡಲು ತಿಳಿಸಿ ಕಳುಹಿಸಿಕೊಟ್ಟಿರುತ್ತಾನೆ.

ಆರೋಪಿಯಿಂದ 146 ಕೆ.ಜಿ 300 ಗ್ರಾಂ ಶ್ರೀಗಂಧದ ಮರದ ತುಂಡುಗಳನ್ನು ವಶಪಡಿಸಿಕೊಳ್ಳಲಾಗಿರುತ್ತದೆ. ಮೌಲ್ಯ ₹ 14,60,000/– (ಹದಿನಾಲ್ಕು ಲಕ್ಷದ ಆರವತ್ತು ಸಾವಿರ ರೂಪಾಯಿ) ಆಗಿರುತ್ತದೆ. ಈ ಪ್ರಕರಣದ ಆರೋಪಿಗಳಲ್ಲಿ ಇಬ್ಬರು ತಲೆಮರೆಸಿಕೊಂಡಿದ್ದು, ಪತ್ತೆ ಕಾರ್ಯ ಮುಂದುವರಿದಿದೆ.

ದಿನಾಂಕ:06/12/2024 ರಂದು ಆರೋಪಿಯನ್ನು ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು, ಮಾನ್ಯ ನ್ಯಾಯಾಲಯವು ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಿರುತ್ತೆ.

ಈ ಕಾರ್ಯಾಚರಣೆಯನ್ನು ಬೆಂಗಳೂರು ದಕ್ಷಿಣ ವಿಭಾಗದ ಉಪ ಪೊಲೀಸ್ ಆಯುಕ್ತರಾದ ಶ್ರೀ ಲೋಕೇಶ್. ಭ. ಜಗಲಾಸರ್, ಐಪಿಎಸ್ ರವರ ಮಾರ್ಗದರ್ಶನದಲ್ಲಿ ಹಾಗೂ ಸುಬ್ರಮಣ್ಯಪುರ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತರಾದ ಶ್ರೀ ಗಿರೀಶ್.ಎಸ್.ಬಿ ರವರ ಉಸ್ತುವಾರಿಯಲ್ಲಿ, ಸುಬ್ರಮಣ್ಯಪುರ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಶ್ರೀ ರಾಜು.ಎಂ.ಎಸ್ ರವರ ಅಧಿಕಾರಿ/ಸಿಬ್ಬಂದಿಗಳ ತಂಡ ಕೈಗೊಂಡು ಪ್ರಕರಣವನ್ನು ಪತ್ತೆ ಮಾಡುವಲ್ಲಿ ಯಶಸ್ವಿಯಾಗಿರುತ್ತಾರೆ.